**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ ಹೊನ್ನಾವರ.**

ಸಿಸಿ ನಂಃ 2492/2022

ಸಿ ಡಬ್ಲುಃ 1

ಪಿ ಡಬ್ಲುಃ 1

| | |
|---|---|
| ಸಾಕ್ಷಿದಾರರ ಹೆಸರು | ಅಶ್ವಿನಿ |
| ತಂದೆಯ ಹೆಸರು | ಗಣಪತಿ |
| ವಯಸ್ಸು | 26 |
| ಉದ್ಯೋಗ | ಖಾಸಗಿ ಉದ್ಯೋಗ |
| ವಾಸ್ತವ್ಯ | ಮಂಕಿ |

ಸಾಕ್ಷಿಯನ್ನು ದಿನಾಂಕ **06-03-2026** ರಂದು ಕರೆಸಲಾಯಿತು ಮತ್ತು ಪ್ರಮಾಣ ವಚನ ಮಾಡಿಸಲಾಯಿತು.

**ಮುಖ್ಯ ವಿಚಾರಣೆಃ ಸ.ಸ.ಅಭಿಯೋಜಕ ರವರಿಂದಃ**

ಆರೋಪಿತನ ಪರಿಚಯ ನನಗೆ ಇದೆ. ಆರೋಪಿತನು ನನ್ನನ್ನು ಅವಾಚ್ಯ ಶಬ್ಧಗಳಿಂದ ಬೈದಿದ್ದು ಇರುವುದಿಲ್ಲ. ಹಲ್ಲೆ ಮಾಡಿದ್ದು ಇರುವುದಿಲ್ಲ. ಆರೋಪಿಯು ನನ್ನ ಖಾಸಗಿ ದೃಶ್ಯಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಟ್ಟು, ನನ್ನ ಮಾನಕ್ಕೆ ಕುಂದುಪಡಿಸಿದ್ದು ಇರುವುದಿಲ್ಲ. ಯಾವುದೇ ಜೀವ ಬೆದರಿಕೆ ಹಾಕಿದ್ದು ಇರುವುದಿಲ್ಲ. ಸಾಕ್ಷಿಯು ನ್ಯಾಯಾಲಯದ ಮುಂದಿರುವ ದೂರನ್ನು ನೋಡಿ ಗುರುತಿಸಿದ್ದು, ಸದರಿ **ದೂರನ್ನು ನಿಪಿ.1** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿಪಿ. 1(ಎ)** ಎಂದು ಗುರುತಿಸಲಾಯಿತು. ಸಾಕ್ಷಿಯು ಕಲಂ.164 ರಡಿಯಲ್ಲಿ ನೀಡಿದ ಹೇಳಿಕೆಯನ್ನು ನೋಡಿ ಗುರುತಿಸಿದ್ದು, ಅದನ್ನು **ನಿಪಿ2** ಎಂದು, ಸಾಕ್ಷಿಯ ಸಹಿಗಳನ್ನು **ನಿಪಿ.2(ಎ) ಯಿಂದ (ಸಿ)** ಎಂದು ಗುರುತಿಸಲಾಯಿತು. ಸಾಕ್ಷಿಯು ನ್ಯಾಯಾಲಯದ ಮುಂದಿರುವ ದಿಃ 16-02-2021 ರ ಪಂಚನಾಮೆಯನ್ನು ನೋಡಿ ಗುರುತಿಸಿದ್ದು, ಸದರಿ **ಪಂಚನಾಮೆಯನ್ನು ನಿಪಿ.3** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿಪಿ.3(ಎ)** ಎಂದು ಗುರುತಿಸಲಾಯಿತು. ಸಾಕ್ಷಿಯು ನ್ಯಾಯಾಲಯದ ಮುಂದಿರುವ ಘಟನಾ ಸ್ಥಳದ ಪಂಚನಾಮೆಯನ್ನು ನೋಡಿ ಗುರುತಿಸಿದ್ದು, ಸದರಿ **ಘಟನಾ ಸ್ಥಳದ ಪಂಚನಾಮೆಯನ್ನು ನಿಪಿ.4** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿಪಿ.4(ಎ)** ಎಂದು ಗುರುತಿಸಲಾಯಿತು. ಸಾಕ್ಷಿಯು ನ್ಯಾಯಾಲಯದ ಮುಂದಿರುವ ನಕಾಶೆಯನ್ನು ನೋಡಿ ಗುರುತಿಸಿದ್ದು, ಸದರಿ **ನಕಾಶೆಯನ್ನು ನಿಪಿ.5** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿಪಿ.5(ಎ)** ಎಂದು ಗುರುತಿಸಲಾಯಿತು. ನಿಪಿ1 ರಲ್ಲಿ ಇರುವ ವಿಚಾರಗಳ ಬಗ್ಗೆ ನನಗೆ ಮಾಹಿತಿ ಇರುವುದಿಲ್ಲ. ನಿಪಿ2 ರಿಂದ 5

ಪಿ ಡಬ್ಲುಃ 1

ರವರೆಗೆ ಇರುವ ವಿಷಯಗಳ ಬಗ್ಗೆ ನನಗೆ ಗೊತ್ತಿರುವುದಿಲ್ಲ. ನಾನು ಯಾವುದೇ ಚಿಕಿತ್ಸೆಯನ್ನು ಪಡೆದುಕೊಂಡಿದ್ದು ಇರುವುದಿಲ್ಲ. ಘಟನೆಯ ಬಗ್ಗೆ ಪೊಲೀಸರಿಗೆ ಮರು ಹೇಳಿಕೆಯನ್ನು ನೀಡಿದ್ದು ಇರುವುದಿಲ್ಲ. ಕಲಂ 164 ರಡಿ ನೀಡಿದ ಹೇಳಿಕೆಯ ಅಂಶಗಳನ್ನು ಯಾರದೋ ಒತ್ತಡಕ್ಕೆ ಮಣಿದು ನೀಡಿರುತ್ತೇನೆ.

(ಈ ಹಂತದಲ್ಲಿ ಸ.ಸ.ಅಭಿಯೋಜಕರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

**ಪಾಟೀ ಸವಾಲುಃ ಸ.ಸ.ಅಭಿಯೋಜಕ ರವರಿಂದಃ**

**ನನಗೆ** ಪ್ರಕರಣ ದಾಖಲಾಗುವ ಪೂರ್ವದಲ್ಲಿ 2 ವರ್ಷದ ಹಿಂದೆ ಆರೋಪಿತನು ಇನ್ಸಟಾಗ್ರಾಂನಲ್ಲಿ ಪರಿಚಯವಾಗಿದ್ದು ಎಂದರೆ ಸರಿಯಲ್ಲ. ಆ ಪರಿಚಯದ ನಂತರ ನಮಗೆ ಪ್ರೀತಿ ಬೆಳೆದಿತ್ತು ಎಂದರೆ ಸರಿಯಲ್ಲ. ಈ ಬಗ್ಗೆ ನಮಗೆ ಮನೆಯವರು ಬುದ್ಧಿ ಹೇಳಿದ್ದರು ಎಂದರೆ ಸರಿಯಲ್ಲ. ನಾನು ಆರೋಪಿತನಿಂದ ಪಡೆದ 3 ಸಾವಿರ ರೂಪಾಯಿಯನ್ನು ಆತನಿಗೆ ಹಾಕಿದ್ದು, ಆ ಸಂದರ್ಭದಲ್ಲಿ ಆತನು ನನ್ನ ಮನೆಯವರ ಜೊತೆ ಮಾತಾಡಿ ನನ್ನನ್ನು ಮದುವೆಯಾಗುತ್ತೇನೆ ಎಂದು ಹೇಳಿದ್ದನು ಎಂದರೆ ಸರಿಯಲ್ಲ. ಆದ ಕಾರಣ ಅವನೊಂದಿಗೆ ಮತ್ತೆ ಫೋನ್ ನಲ್ಲಿ ಮಾತನಾಡಲು ಶುರು ಮಾಡಿದ್ದೆ ಎಂದರೆ ಸರಿಯಲ್ಲ. ಆರೋಪಿತನನ್ನು ನಾನು ಶ್ರೀದೇವಿ ಆಸ್ಪತ್ರೆಯ ಬಳಿ ಭೇಟಿ ಮಾಡಿದ್ದೆ ಎಂದರೆ ಸರಿಯಲ್ಲ. ಅಲ್ಲಿ ಆತನು ನನ್ನನ್ನು ಗೋಕರ್ಣಕ್ಕೆ ಕರೆದುಕೊಂಡು ಹೋಗುತ್ತೇನೆ, ಅದಕ್ಕೆ ನಾನು ಬರುವುದಿಲ್ಲ ಎಂದು ಹೇಳಿದಾಗ ನನ್ನ ಕೆನ್ನೆಯ ಮೇಲೆ ಹೊಡೆದಿದ್ದನು ಎಂದರೆ ಸರಿಯಲ್ಲ. ಆರೋಪಿತನು ನನ್ನನ್ನು ಬಲವಂತದಿಂದ ಬೈಕಿನಲ್ಲಿ ಕೂರಿಸಿ ಗೋಕರ್ಣದ ಲಾಡ್ಜಿನಲ್ಲಿ ನನ್ನನ್ನು ರೂಮ್ ಮಾಡಿ ಇರಿಸಿದ್ದ ಎಂದರೆ ಸರಿಯಲ್ಲ. ರೂಮಿನಲ್ಲಿ ಅವನು ನನ್ನ ಜೊತೆ ಜಗಳ ಮಾಡಿ, ಅಸಭ್ಯವಾಗಿ ವರ್ತಿಸಿದ್ದ ಎಂದರೆ ಸರಿಯಲ್ಲ. ಅವನು ನನಗೆ ಹಲ್ಲೆ ಮಾಡಿದ್ದರಿಂದ ನನಗೆ ಜ್ಞಾನ ತಪ್ಪಿತ್ತು ಎಂದರೆ ಸರಿಯಲ್ಲ. ಆರೋಪಿತನು ನನ್ನ ಬಟ್ಟೆ ತೆಗೆದು ನನ್ನ ಬೆತ್ತಲೆ ದೇಹವನ್ನು ಅವನ ಮೊಬೈಲ್ ನಿಂದ ವಿಡಿಯೋ ಮಾಡಿಕೊಂಡಿದ್ದ ಎಂದರೆ ಸರಿಯಲ್ಲ. ನನಗೆ ಪ್ರಜ್ಞೆ ತಪ್ಪಿತ್ತು ಎಂದರೆ ಸರಿಯಲ್ಲ. ನನಗೆ ಎಚ್ಚರವಾದಾಗ ನನ್ನ ಮೈ ಮೇಲೆ ಬಟ್ಟೆ ಇರಲಿಲ್ಲ ಎಂದರೆ ಸರಿಯಲ್ಲ. ನಾನು ಆರೋಪಿತನ ಬಳಿ ಈ ಬಗ್ಗೆ ಕೇಳಿದ್ದಕ್ಕೆ ನನಗೆ ಸಿಕ್ಕಾಪಟ್ಟೆ ಹೊಡೆದಿದ್ದನು ಎಂದರೆ ಸರಿಯಲ್ಲ. ಆರೋಪಿತನು ನನ್ನನ್ನು ಮತ್ತೆ ಶ್ರೀದೇವಿ ಆಸ್ಪತ್ರೆಯ ಬಳಿ ಬಿಟ್ಟಿದ್ದನು ಎಂದರೆ ಸರಿಯಲ್ಲ. ಆರೋಪಿತನು ನನಗೆ ಫೋನ್ ಮಾಡಿ ನೀನು ನನ್ನ ಜೊತೆ ಮಾತನಾಡದೇ ಇದ್ದರೆ ನನ್ನ ಅಶ್ಲೀಲ ಫೋಟೋಗಳನ್ನು ನನ್ನ ಸಂಬಂಧಿಕರಿಗೆ ಹಾಗೂ ಇನ್ಸ್ಟಾಗ್ರಾಂನಲ್ಲಿ ಕಳುಹಿಸುವುದಾಗಿ ಬೆದರಿಸಿದ್ದನು ಎಂದರೆ ಸರಿಯಲ್ಲ. ನನ್ನ ಹುಟ್ಟು ಹಬ್ಬದ ದಿನ ನನ್ನ ಅಶ್ಲೀಲ ವಿಡಿಯೋಗಳನ್ನು ನನ್ನ ಬಾವನ ಮೊಬೈಲ್ ಗೆ ಕಳುಹಿಸಿದ್ದನು ಎಂದರೆ ಸರಿಯಲ್ಲ. ಆರೋಪಿತನು ನನ್ನ ಜೀವನ ನರಕ ಮಾಡುತ್ತೇನೆ ಎಂದು ಬೆದರಿಕೆ ಹಾಕಿದ್ದನು ಎಂದರೆ ಸರಿಯಲ್ಲ. ಮತ್ತು ಪೊಲೀಸರಿಗೆ ಕಂಪ್ಲೆಂಟ್ ನೀಡಿದರೆ ನನ್ನ ವಿಡಿಯೋವನ್ನು ಇನ್ಸ್ಟಾಗ್ರಾಂನಲ್ಲಿ ಹಾಕುವುದಾಗಿ ಬೆದರಿಸಿದ್ದ ಎಂದರೆ ಸರಿಯಲ್ಲ. ಅದಕ್ಕೆ ನಾನು ಒಪ್ಪದೇ ಇದ್ದಾಗ ಆರೋಪಿ ಸಿಟ್ಟಾಗಿ ಗೋಕರ್ಣದಲ್ಲಿ ತೆಗೆದ ಅಶ್ಲೀಲ ವಿಡಿಯೋವನ್ನು ಇನ್ಸ್ಟಾಗ್ರಾಂನಲ್ಲಿ ನನ್ನ ಹೆಸರಿಗೆ ಫೇಕ್

ಪಿ ಡಬ್ಲುಃ 1

ಆಗಿ ಖಾತೆ ತೆರೆದು ಫೋಟೋ ಹಾಕಿ ಸದರಿ ವಿಡಿಯೋವನ್ನು ಹರಿ ಬಿಟ್ಟಿದ್ದ ಎಂದರೆ ಸರಿಯಲ್ಲ. ಈ ಬಗ್ಗೆ ನಾನು ಪೊಲೀಸ್ ಠಾಣೆಯಲ್ಲಿ ನಿಪಿ1 ರಂತೆ ದೂರು ನೀಡಿರುತ್ತೇನೆ ಎಂದರೆ ಸರಿಯಲ್ಲ. ಈ ಬಗ್ಗೆ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಂಡಿರುತ್ತೇನೆ ಎಂದರೆ ಸರಿಯಲ್ಲ. ದಿಃ 06-04-2021 ರಂದು ನಿಪಿ2 ರಂತೆ ಮಾನ್ಯ ನ್ಯಾಯಾಲಯದಲ್ಲಿ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ದಿಃ 16-02-2021 ರಂದು ಆರೋಪಿಯ ಮೊಬೈಲನ್ನು ಚಾಸಾ13 ರವರು ಹಾಜರುಪಡಿಸಿದ ಮೊಬೈಲನ್ನು ಚಾಸಾ2 ಮತ್ತು 3 ರವರ ಸಮಕ್ಷಮ ಪೊಲೀಸರು ನನ್ನ ಮುಂದೆ ಜಪ್ತು ಪಡಿಸಿಕೊಂಡು, ವಿವರವಾದ ಪಂಚನಾಮೆಯನ್ನು ಜರುಗಿಸಿ ನನ್ನ ಸಹಿ ಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಅದೇ ದಿನ ಘಟನಾ ಸ್ಥಳವಾದ ಹೊನ್ನಾವರದ ಶ್ರೀದೇವಿ ಆಸ್ಪತ್ರೆ ಹತ್ತಿರ ಕೆಳಗಿನ ಪಾಳ್ಯ ಹೋಗುವ ರಸ್ತೆಯಲ್ಲಿರುವ ಅಂಡರ್ ಪಾಸ್ ಹತ್ತಿರ ನಾನು ತೋರಿಸಿದಂತೆ ಪೊಲೀಸರು ಚಾಸಾ2 ಮತ್ತು 3 ರವರ ಸಮಕ್ಷಮ ನಿಪಿ4 ರಂತೆ ವಿವರವಾದ ಪಂಚನಾಮೆಯನ್ನು ಜರುಗಿಸಿ, ನಿಪಿ5 ರಂತೆ ಕಚ್ಚಾ ನಕಾಶೆಯನ್ನು ತಯಾರಿಸಿ ನನ್ನ ಸಹಿ ಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ. ದಿಃ 08-04-2021 ರಂದು ಪೊಲೀಸರ ಮುಂದೆ ಮರು ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಮರು ಹೇಳಿಕೆಯಲ್ಲಿನ ಅಂಶಗಳನ್ನು ಅಲ್ಲಗಳೆದಿದ್ದರಿಂದ **ಮರು ಹೇಳಿಕೆ**ಯನ್ನು **ನಿಪಿ.6** ಎಂದು ಗುರುತಿಸಲಾಯಿತು. ಎಲ್ಲಾ ವಿಚಾರಗಳು ಗೊತ್ತಿದ್ದರೂ ಆರೋಪಿಯೊಂದಿಗೆ ರಾಜಿ ಮಾಡಿಕೊಂಡು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಆರೋಪಿ ಪರ ವಕೀಲರು ಪಾಟಿ ಸವಾಲು ಇಲ್ಲ ಎಂದು ಹೇಳಿರುತ್ತಾರೆ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕೀಕೃತಗೊಳಿಸಲಾಯಿತು.)

ಓ ಹೆ ಕೇ ಸರಿ ಇದೆ.

**-Sd/-**

**ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಪ್ರ.ದ.ನ್ಯಾದಂ..**

**ಹೊನ್ನಾವರ.**